ಬೈಲಹೊಂಗಲ ನಗರದಲ್ಲಿ ಹೆಚ್ಚಿನ ಆಶ್ರಯ ಮನೆಗಳ ನಿರ್ಮಾಣ

1495(1519) ಶ್ರೀ ಕೌಜಲಗಿ ಮಹಾಂತೇಶ್ ಶಿವಾನಂದ (ಬೈಲಹೊಂಗಲ): ಮಾನ್ಯ ವಸತಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ. ಬೆಳಗಾವಿ ಜಿಲ್ಲೆ ಬೈಲಹೊಂಗಲ ನಗರದಲ್ಲಿ ಮಲಪ್ರಭಾ ಯೋಜನೆಯ ಮುಳುಗಡೆ ಪ್ರದೇಶದ ಜನರು ಹೆಚ್ಚಾಗಿ ವಲಸೆಯಾಗಿದ್ದು, ಮುಳುಗಡೆ ಪ್ರದೇಶದ ಜನರ ಅನುಕೂಲತೆಗಾಗಿ ಹೆಚ್ಚಿನ ಆಶ್ರಯ ಮನೆಗಳನ್ನು ಕಟ್ಟಲು ಕ್ರಮ ಕೈಗೊಳ್ಳಲಾಗುವುದೆ;

ಆ. ಈಗಾಗಲೇ ಕಟ್ಟಿದ ಆಶ್ರಯ ಮನೆಗಳಿಗೆ ಸರಿಯಾದ ರಸ್ತೆ ಹಾಗೂ ಚರಂಡಿ ಇಲ್ಲದೆ ಇರುವುದರಿಂದ ರಸ್ತೆಗಳ ಡಾಂಬರೀಕರಣ ಮತ್ತು ಚರಂಡಿ ವವಸ್ಥೆ ಮಾಡಲು ಕ್ರಮ ಕೈಗೊಳ್ಳುವುದೇ;

ಇ. ನಗರದಲ್ಲಿ ಮನೆಗಳನ್ನು ಕಟ್ಟುವ ಸಲುವಾಗಿ ಸ್ಥಳ ಇಲ್ಲದೆ ಇರುವುದರಿಂದ ಸ್ಥಳ ಖರೀದಿ ಮಾಡಲು ಜಿಲ್ಲಾಧಿಕಾರಿಗಳಿಗೆ ಆದೇಶ ಮಾಡಲಾಗುವುದೇ?

ಶ್ರೀ ಸಿ.ಆರ್. ಸಗೀರ್ ಅಹಮದ್ (ವಸತಿ ಸಚಿವರು)

ಅ. ಹಾಲಿ ಪ್ರಸ್ತಾವನೆ ಇಲ್ಲ

ಆ. ಇದು ಸ್ಥಳೀಯ ಸಂಸ್ಥೆಯವರ ಜವಾಬ್ದಾರಿಯಾಗಿರುತ್ತದೆ.

ಇ. ಹಾಲಿ ಪ್ರಸ್ತಾವನೆ ಇಲ್ಲ

ಬೈಲಹೊಂಗಲ ತಾಲ್ಲೂಕಿನ ವಣ್ಣೂರು ಹಾಗೂ ಸಂಗೊಳ್ಳಿ ಗ್ರಾಮಗಳಲ್ಲಿನ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಕಾಂಪೌಂಡ್ ಹಾಗೂ ವಸತಿ ಗೃಹಗಳ ನಿರ್ಮಾಣ

1496(1520) ಶ್ರೀ ಕೌಜಲಗಿ ಮಹಾಂತೇಶ್ ಶಿವಾನಂದ (ಬೈಲಹೊಂಗಲ): ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ. ಬೆಳಗಾವಿ ಜಿಲ್ಲೆ ಬೈಲಹೊಂಗಲ ತಾಲ್ಲೂಕಿನ ವಣ್ಣೂರ ಹಾಗೂ ಸಂಗೊಳ್ಳಿ ಗ್ರಾಮಗಳಲ್ಲಿರುವ ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ಕಾಂಪೌಂಡ್ ಗೋಡೆ ಇಲ್ಲದೆ ಇರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ. ಹಾಗಿದ್ದರೆ, ಕೂಡಲೇ ಕಾಂಪೌಂಡ್ ಗೋಡೆಯನ್ನು ಕಟ್ಟಲು ಕ್ರಮ ಕೈಗೊಳ್ಳಲಾಗುವುದೇ;

ಇ. ಈ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ವೈದ್ಯರು ಹಾಗೂ ಸಿಬ್ಬಂದಿಗಳಿಗೆ ವಸತಿ ಗೃಹಗಳು ಇಲ್ಲದೆ ಇರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ;

ಈ. ಹಾಗಿದ್ದಲ್ಲಿ, ಕೂಡಲೇ ವಸತಿ ಗೃಹಗಳನ್ನು ಕಟ್ಟಲು ಕ್ರಮ ಕೈಗೊಳ್ಳಲಾಗುವುದೇ;

ಶ್ರೀ ಕಾಗೋಡು ತಿಮ್ಮಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಅ. ಬಂದಿದೆ.

ಆ. ಹಂತ ಹಂತವಾಗಿ ಎಲ್ಲಾ ಪ್ರಾಥಮಿಕ ಆರೋಗ್ಯಕೇಂದ್ರಗಳಿಗೂ ಕಾಂಪೌಂಡ್ ಗೋಡೆ ನಿರ್ಮಾಣ ಮುಂಬರುವ ಜಿಲ್ಲಾ ಪಂಚಾಯತ್ ಆಯವ್ಯದಲ್ಲಿ ಕೈಗೊಳ್ಳಲು ಸೂಚಿಸಲಾಗುವುದು.